All India Radio: Bangalore.

Pradesh Samachar In Kannada

13.12.2017 / 18.40 hrs

ಆಕಾಶವಾಣಿ : ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ರಾಜ್ಯಸರ್ಕಾರದ ಒಂದು ತಿಂಗಳ ಅವಧಿಯ ಅಭಿವೃದ್ಧಿ ಪರ್ವ ಆರಂಭ ; ಬೀದರ್ ಜಿಲ್ಲೆಯಲ್ಲಿ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಮುಖ್ಯಮಂತ್ರಿ ಚಾಲನೆ
- ಬೆಂಗಳೂರಿನಲ್ಲಿ ಪ್ರತಿ ತಿಂಗಳ ಎರಡನೇ ಭಾನುವಾರವನ್ನು ವಿರಳ ಸಂಚಾರ ದಿನವನ್ನಾಗಿ ಆಚರಿಸಲು ನಿರ್ಧಾರ
- ಈ ಬಾರಿ ಉತ್ತಮ ಹಿಂಗಾರು ಇಳುವರಿ ನಿರೀಕ್ಷಿತ – ಸಚಿವ ಕೃಷ್ಣ ಬೈರೇಗೌಡ
- ಗಲಭೆಗೀಡಾಗಿದ್ದ ಉತ್ತರ ಕನ್ನಡ ಜಿಲ್ಲೆಯಲ್ಲಿ ಪರಿಸ್ಥಿತಿ ಸಹಜ ಸ್ಥಿತಿಯತ್ತ

********+

ರಾಜ್ಯ ಸರ್ಕಾರ ಒಂದು ತಿಂಗಳ ಅವಧಿಯ ಅಭಿವೃದ್ಧಿ ಪರ್ವ ಇಂದು ಆರಂಭವಾಗಿದ್ದು, ಇದರ ಅಂಗವಾಗಿ ಬೀದರ್ ಜಿಲ್ಲೆಯಲ್ಲಿ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಬಸವ ಕಲ್ಯಾಣದಲ್ಲಿಂದು ಚಾಲನೆ ನೀಡಿದರು.

ಬಳಿಕ ಸಿದ್ದರಾಮಯ್ಯ, ಕೂಡಲಸಂಗಮ ಅಭಿವೃದ್ಧಿಗಾಗಿ ರಾಜ್ಯಸರ್ಕಾರ ಅನೇಕ ಕಾರ್ಯಕ್ರಮಗಳನ್ನು ಜಾರಿ ಮಾಡಿದೆ, ಬಸವ ಕಲ್ಯಾಣದಲ್ಲಿ ಆಧುನಿಕ ಅನುಭವ ಮಂಟಪ ನಿರ್ಮಾಣ ಕುರಿತಂತೆ ಬರುವ ಆಯವ್ಯಯದಲ್ಲಿ ಹಣ ಮೀಸಲಿಡಲಾಗುವುದು ಎಂದು ಹೇಳಿದರು.

ಜಲಸಂಪನ್ಮೂಲ ಸಚಿವ ಎಂ. ಬಿ. ಪಾಟೀಲ್ ಮಾತನಾಡಿ, ಉತ್ತರ ಕರ್ನಾಟಕದ ಅಭಿವೃದ್ಧಿಗೆ ರಾಜ್ಯಸರ್ಕಾರ ಹೆಚ್ಚು ಒತ್ತು ನೀಡಿದ್ದು, ನೀರಾವರಿ ಯೋಜನೆಗಳಿಗೆ ಹೆಚ್ಚು ಸಂಪನ್ಮೂಲ ನಿಗದಿಯಾಗಿದೆ, ಯೋಜನೆಗಳು ಪ್ರಗತಿಯಲ್ಲಿವೆ ಎಂದರು.

ಸಚಿವರಾದ ಈಶ್ವರ್ ಖಂಡ್ರೆ, ಎಂ. ಬಿ. ಪಾಟೀಲ್, ರೋಷನ್ ಬೇಗ್ , ಎಚ್. ಆಂಜನೇಯ ಸೇರಿದಂತೆ ಚುನಾಯಿತ ಪ್ರತಿನಿಧಿಗಳು ಸಮಾರಂಭದಲ್ಲಿ ಉಪಸ್ಥಿತರಿದ್ದರು.

***********+

ವಾಯುಮಾಲಿನ್ಯದಲ್ಲಿ ಬೆಂಗಳೂರು ಮಹಾನಗರ ದೇಶದಲ್ಲಿ ಆರನೇ ಸ್ಥಾನದಲ್ಲಿದ್ದು, ವಾಹನ ದಟ್ಟಣೆಯಿಂದ ಉಂಟಾಗುತ್ತಿರುವ ಮಾಲಿನ್ಯ ನಿಯಂತ್ರಿಸಲು ಸಾರ್ವಜನಿಕರು ಸಾಮೂಹಿಕ ಸಾರಿಗೆ ವ್ಯವಸ್ಥೆ ಬಳಸುವಂತೆ ಸಾರಿಗೆ ಸಚಿವ ಹೆಚ್. ಎಂ. ರೇವಣ್ಣ ಮನವಿ ಮಾಡಿದ್ದಾರೆ.

ಫೆಬ್ರವರಿಯಿಂದ ಪ್ರತಿ ತಿಂಗಳ ಎರಡನೇ ಭಾನುವಾರವನ್ನು ಬೆಂಗಳೂರು ಉಳಿವಿಗಾಗಿ ವಿರಳ ಸಂಚಾರ ದಿನ ಆಚರಿಸಲು ನಿರ್ಧರಿಸಲಾಗಿದೆ. ಅಂದು ಬಸ್ಸಿನ ದರ ತಗ್ಗಿಸಿ ಸಾರ್ವಜನಿಕರು ಬಸ್ಸುಗಳಲ್ಲಿ ಪ್ರಯಾಣ ಮಾಡುವುದನ್ನು ಪ್ರೋತ್ಸಾಹಿಸುವ ಪ್ರಯತ್ನ ಮಾಡಲಾಗುವುದು ಎಂದು ಸಚಿವರು ತಿಳಿಸಿದರು.

(ಧ್ವನಿ– ಹೆಚ್. ಎಂ. ರೇವಣ್ಣ )

ಈ ಕುರಿತು ಅರಿವು ಮೂಡಿಸಲು ಬಿಬಿಎಂಪಿ ವಿಶೇಷ ಸಭೆ ಕರೆಯಲಿದೆ , ಅಲ್ಲದೇ, ವಿವಿಧ ಇಲಾಖೆಗಳು ಮತ್ತು ಖಾಸಗಿ ವಲಯದ ಸಂಸ್ಥೆಗಳ ಸಹಯೋಗವನ್ನು ಕೋರಲಾಗಿದೆ ಎಂದು ರೇವಣ್ಣ ಹೇಳಿದರು.

*******+

ಈ ಬಾರಿಯ ಹಿಂಗಾರಿನಲ್ಲಿ ಬಿತ್ತನೆ ಕಾರ್ಯ ಉತ್ತಮವಾಗಿದ್ದು, ಒಳ್ಳೆಯ ಇಳುವರಿ ಲಭ್ಯವಾಗುವ ಆಶಯವಿದೆ ಎಂದು, ಕೃಷಿ ಖಾತೆ ಸಚಿವ ಕೃಷ್ಣ ಬೈರೇಗೌಡ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ತಿಂಗಳ ಅಂತ್ಯದ ವೇಳೆಗೆ ನಿಗದಿತ 32 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಕಾರ್ಯ ಪೂರ್ಣವಾಗಲಿದ್ದು, ಈ ಅವಧಿಯಲ್ಲಿ 10 ದಶಲಕ್ಷ ಟನ್ ಆಹಾರ ಧಾನ್ಯ ಉತ್ಪಾದನೆಯಾಗುವ ಸಾಧ್ಯತೆ ಇದೆ ಎಂದರು.

ಧ್ವನಿ 30 ಸೆಕೆಂಡ್ಸ್

ಈಗಾಗಲೇ 15 ಶೇಂಗಾ ಖರೀದಿ ಕೇಂದ್ರಗಳನ್ನು ಆರಂಭ ಮಾಡಲಾಗಿದೆ, ತೊಗರಿ ಖರೀದಿ ಕೇಂದ್ರವನ್ನೂ ಆರಂಭಿಸಲಾಗುವುದು, 2300 ರೂಪಾಯಿ ದರದಲ್ಲಿ ಸರ್ಕಾರ ರಾಗಿಯನ್ನು ಖರೀದಿಸುತ್ತಿದೆ ಎಂದು ಕೃಷ್ಣಬೈರೇಗೌಡ ತಿಳಿಸಿದರು.

**********+

ಭ್ರಷ್ಟಾಚಾರ ನಿಗ್ರಹ ದಳದ ಅಧಿಕಾರಿಗಳು ಇಂದು ಬೆಳಿಗ್ಗೆ ರಾಜ್ಯದ ವಿವಿಧೆಡೆ 11 ಅಧಿಕಾರಿಗಳ ಮನೆ ಹಾಗೂ ನಿವಾಸಗಳ ಮೇಲೆ ದಾಳಿ ನಡೆಸಿ, ಅಕ್ರಮ ದಾಖಲೆ ಪತ್ರಗಳ ಪರಿಶೀಲನೆ ನಡೆಸಿದ್ದಾರೆ.

ಆದಾಯಕ್ಕೂ ಮೀರಿ ಆಸ್ತಿ ಸಂಪಾದನೆ ದೂರಿನ ಹಿನ್ನೆಲೆಯಲ್ಲಿ ಬಳ್ಳಾರಿ ಜಿಲ್ಲೆಯ ತೋರಣಗಲ್ಲಿನಲ್ಲಿರುವ ವಿಜಯನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಆಯುಕ್ತ ಎಸ್. ಷಾಷಾವಲಿ ಮನೆ ಮೇಲೆ ದಾಳಿ ನಡೆಸಿದ್ದು, ನಗದು, ಬಂಗಾರ ಸೇರಿದಂತೆ ಹಲವು ದಾಖಲೆ ಪತ್ರಗಳನ್ನು ವಶಪಡಿಸಿಕೊಂಡಿದ್ದಾರೆ.

ಮತ್ತೊಂದೆಡೆ, ಬೆಳಗಾವಿ ಜಿಲ್ಲೆ ಕಿತ್ತೂರು ಎಇಇ ಭೀಮಾನಾಯ್ಕ್ ಮನೆ ಸೇರಿದಂತೆ 6 ಕಡೆ ದಾಳಿ ನಡೆಸಿದ್ದಾರೆ.

ಕಲಬುರಗಿಯ ನೀರಾವರಿ ಇಲಾಖೆಯ ಕಾರ್ಯನಿರ್ವಾಹಕ ಇಂಜಿನಿಯರ್ ಹೆಚ್. ಜಿ. ಮಲ್ಲಪ್ಪ, ಬಂಟ್ವಾಳದ ಕೃಷಿ ಇಲಾಖೆ ಸಹಾಯಕ ನಿರ್ದೇಶಕ ಫ್ರಾನ್ಸಿಸ್ ಪೌಲ್ ಮಿರಾಂಡಾ, ಕೊರಟಗೆರೆಯ ಲೋಕೋಪಯೋಗಿ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಜಿ. ಸಿ. ಜಗದೀಶ್, ಚಿಕ್ಕಬಳ್ಳಾಪುರದ ನೀರಾವರಿ ಇಲಾಖೆ ಸಹಾಯಕ ಕಾರ್ಯನಿರ್ವಾಹಕ ಡಿ. ಹೇಮಂತ್, ಬೆಂಗಳೂರಿನ ಕಾರ್ಮಿಕ ಭವನದ ಫ್ಯಾಕ್ಟರಿ ಮತ್ತು ಬಾಯ್ಲರ್ ವಿಭಾಗದ ಜಂಟಿ ನಿರ್ದೇಶಕ ಎಂ. ಸಿ. ಶಶಿಕುಮಾರ್ ಸೇರಿದಂತೆ 11 ಅಧಿಕಾರಿಗಳ ಮನೆ ಮೇಲೆ ಏಕಕಾಲಕ್ಕೆ ದಾಳಿ ನಡೆಸಲಾಗಿದೆ.ಅಕ್ರಮ ಆಸ್ತಿ ಪಾಸ್ತಿಗಳ ಪರಿಶೀಲನೆ ಮುಂದುವರಿದಿದೆ ಎಂದು ಭ್ರಷ್ಟಚಾರ ನಿಗ್ರಹ ದಳದ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**********+

ಉತ್ತರ ಕನ್ನಡ ಜಿಲ್ಲೆಯಲ್ಲಿ ಬಿಗುವಿನ ವಾತವಾರಣ ನಿರ್ಮಾಣವಾಗಲು ಬಿಜೆಪಿ ಮತ್ತು ಬಲಪಂಥೀಯ ಸಂಘಟನೆಗಳೇ ಕಾರಣ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಆರೋಪಿಸಿದ್ದಾರೆ.

ಬಸವ ಕಲ್ಯಾಣದ ಹೆಲಿಪ್ಯಾಡ್‌ನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜಕೀಯ ಲಾಭಕ್ಕಾಗಿ ಯುವಕನ ಹತ್ಯೆ ಪ್ರಕರಣವನ್ನು ಬಿಜೆಪಿ ಬಳಸಿಕೊಳ್ಳುತ್ತಿದೆ, ವಾಸ್ತವವಾಗಿ ಯುವಕನ ಕುಟುಂಬದ ಬಗ್ಗೆ ಅವರಿಗೆ ಯಾವುದೇ ಕನಿಕರ ಇಲ್ಲ ಎಂದು ವಾಗ್ದಾಳಿ ನಡೆಸಿದರು.

********+

ಈ ಮಧ್ಯೆ ಕಳೆದೆರಡು ದಿನಗಳಿಂದ ಬಿಗುವಿನಿಂದ ಕೂಡಿದ್ದ ಉತ್ತರ ಕನ್ನಡ ಜಿಲ್ಲೆ ಸಹಜ ಸ್ಥಿತಿಯತ್ತ ಮರಳುತ್ತಿದೆ.

ಪರಿಸ್ಥಿತಿ ನಿಯಂತ್ರಣಕ್ಕೆ ಬಂದಿದ್ದು, ಇಂದು ಜಿಲ್ಲೆಯ ಯಾವುದೇ ಭಾಗದಲ್ಲೂ ಅಹಿತಕರ ಘಟನೆಗಳೇನೂ ವರದಿಯಾಗಿಲ್ಲ, ನಿಷೇಧಾಜ್ಞೆ ಜಾರಿ ಹಿನ್ನೆಲೆಯಲ್ಲಿ ಬಿಗಿ ಬಂದೋಬಸ್ತ್ ಕೈಗೊಳ್ಳಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

***********+

ರಾಜ್ಯದಲ್ಲಿ ಕಳೆದ ನಾಲ್ಕೂವರೆ ವರ್ಷಗಳಲ್ಲಿ ನಡೆದಿರುವ ಹಿಂದೂ ಸಂಘಟನೆಗಳ ಕಾರ್ಯಕರ್ತರ ಹತ್ಯೆ ಪ್ರಕರಣಗಳ ತನಿಖೆಯನ್ನು ರಾಷ್ಟ್ರೀಯ ತನಿಖಾ ದಳ- ಎನ್ ಐಎಗೆ ವಹಿಸಬೇಕೆಂದು ಆಗ್ರಹಿಸಿ, ದಾವಣಗೆರೆಯಲ್ಲಿಂದು ಹಿಂದೂ ಜಾಗರಣಾ ವೇದಿಕೆ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

**********+

ಸಹೋದ್ಯೋಗಿ ಹತ್ಯೆಗೆ ಸುಪಾರಿ ನೀಡಿದ ಆರೋಪದಲ್ಲಿ ನ್ಯಾಯಾಂಗ ಬಂಧನಕ್ಕೆ ಗುರಿಯಾಗಿದ್ದ ಪತ್ರಕರ್ತ ರವಿ ಬೆಳಗೆರೆಗೆ ಷರತ್ತುಬದ್ಧ ಮಧ್ಯಂತರ ಜಾಮೀನು ದೊರಕಿದೆ.

ಈ ಪ್ರಕರಣ ಸಂಬಂಧ ಇಂದು ವಿಚಾರಣೆ ನಡೆಸಿದ ಸಿಟಿ ಸಿವಿಲ್ ನ್ಯಾಯಾಲಯದ ನ್ಯಾಯಾಧೀಶ, ಬಿ. ಮಧುಸೂದನ್, ಬೆಳಗೆರೆ ಅವರಿಗೆ ಅನಾರೋಗ್ಯದ ಕಾರಣ ಇದೇ 16ರವರೆಗೆ ಮಧ್ಯಂತರ ಜಾಮೀನು ಮಂಜೂರು ಮಾಡಿ ತೀರ್ಪು ನೀಡಿದರು.

**********+

ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಗಳ ಜಾರಿ ಪ್ರಗತಿ ಕುರಿತ ವಿಶೇಷ ವರದಿ.

ವಿಜಯಪುರ ಜಿಲ್ಲೆಯ ಸಿಂಧಗಿ ತಾಲೂಕಿನಲ್ಲಿ ಬೇಟಿ ಬಚಾವೋ, ಬೇಟಿ ಪಡಾವೋ ಯೋಜನೆಯ ಅನುಷ್ಠಾನದ ಬಗ್ಗೆ ನಮ್ಮ ಪ್ರತಿನಿಧಿ ನಿಲೇಶ್ ಬೆನಾಲ್ ವರದಿ.

ಧ್ವನಿ----( 1 ನಿಮಿಷ 40 ಸೆಕೆಂಡ್)

***********+

ಸಂಕ್ಷಿಪ್ತ -1

- ಭಾರತೀಯ ಸಮಾಚಾರ ಸೇವೆಯ ನಿವೃತ್ತ ಅಧಿಕಾರಿ ಎಂ.ಆರ್. ಗವಿರಾಯಪ್ಪ ನಿಧನ ಹೊಂದಿದ್ದಾರೆ, ಅವರಿಗೆ 86 ವರ್ಷ ವಯಸ್ಸಾಗಿತ್ತು. ಅವರು ಆಕಾಶವಾಣಿಯ ಬೆಂಗಳೂರು ಕೇಂದ್ರದಲ್ಲಿ ಬಾತ್ಮೀದಾರರಾಗಿ ಸೇವೆ ಸಲ್ಲಿಸಿದ್ದರು.
- ಚಿಕ್ಕಬಳ್ಳಾಪುರ ಜಿಲ್ಲೆ ಗೌರಿಬಿದನೂರು ತಾಲೂಕು ಆನೂಡಿ ಗ್ರಾಮದ ಖ್ಯಾತ ಹಿರಿಯ ರಂಗಭೂಮಿ ಕಲಾವಿದ, ನಾಟಕಕಾರ ಡಾ.ರಾಮಕೃಷ್ಣಯ್ಯ ಅವರು 2017-18 ನೇ ಸಾಲಿನ ಪ್ರತಿಷ್ಠಿತ ಕರ್ನಾಟಕ ನಾಟಕ ಅಕಾಡೆಮಿ ಪ್ರಶಸ್ತಿಗೆ ಪಾತ್ರರಾಗಿದ್ದಾರೆ.( ಪಿಟಿಸಿ)
- ಬೆಂಗಳೂರು ಗ್ರಾಮಾಂತರ ಜಿಲ್ಲೆ ದೊಡ್ಡಬಳ್ಳಾಪುರದಲ್ಲಿಂದು ಬಳಕೆದಾರರ ಹಿತರಕ್ಷಣಾ ಸಂಘದ ನೇತೃತ್ವದಲ್ಲಿ ನಡೆದ ಗಡಿನಾಡಿನಲ್ಲಿ ಕನ್ನಡ ಜಾಗೃತಿ ಸೈಕಲ್ ಜಾಥಾಗೆ ನಗರಸಭೆ ಅಧ್ಯಕ್ಷ ಟಿ.ಎನ್.ಪ್ರಭುದೇವ್ ಚಾಲನೆ ನೀಡಿದರು..(ಪಿಟಿಸಿ)

- ಗದಗ ಜಿಲ್ಲೆ ಶಿರಹಟ್ಟಿ ತಾಲೂಕಿನ ಗೋಜನೂರು ಬಳಿ ಮದುವೆ ದಿಬ್ಬಣಕ್ಕೆ ಹೊರಟಿದ್ದ ಟಾಟಾ ಏಸ್ ವಾಹನಕ್ಕೆ ಹಿಂಬದಿಯಿಂದ ಸರ್ಕಾರಿ ಬಸ್ ಡಿಕ್ಕಿ ಹೊಡೆದ ಪರಿಣಾಮ 10 ಜನರಿಗೆ ಗಾಯಗೊಂಡಿರುವ ಘಟನೆ ನಡೆದಿದೆ.

********+

ಹವಾಮಾನ

ದಕ್ಷಿಣ ಒಳನಾಡಿನ ಅಲ್ಲಲ್ಲಿ ಮಳೆಯಾಗಿದೆ. ಉತ್ತರ ಒಳನಾಡು ಹಾಗೂ ಕರಾವಳಿ ಪ್ರದೇಶಗಳಲ್ಲಿ ಒಣ ಹವೆ ಮುಂದುವರಿದಿದೆ.

ಬಾಗಲಕೋಟೆಯಲ್ಲಿ 12. 4 ಡಿಗ್ರಿ ಸೆಲ್ಸಿಯಸ್ ಕನಿಷ್ಠ ತಾಪಮಾನ ದಾಖಲಾಗಿದೆ.

ಮುನ್ಸೂಚನೆಯಂತೆ ದಕ್ಷಿಣ ಒಳನಾಡು ಹಾಗೂ ಕರಾವಳಿ ಪ್ರದೇಶಗಳಲ್ಲಿ ಮಳೆ ಬೀಳುವ ಸಂಭವವಿದೆ. ಉತ್ತರ ಒಳನಾಡಿನಲ್ಲಿ ಒಣ ಹವೆ ಮುಂದುವರೆಯಲಿದೆ.

ಬೆಂಗಳೂರು ಹಾಗೂ ಸುತ್ತಮುತ್ತ ಸಾಮಾನ್ಯವಾಗಿ ಮೋಡ ಕವಿದ ವಾತವಾರಣವಿದ್ದು, ಮುಂಜಾನೆ ಕೆಲವು ಕಡೆ ಮಂಜು ಆವರಿಸುವ ಸಾಧ್ಯತೆ ಇದೆ.

********+

ಕೇಂದ್ರ ಸರ್ಕಾರ ಜಾರಿಗೆ ತಂದಿರುವ ಪ್ರಧಾನಮಂತ್ರಿ ಕೌಶಲ್ಯ ವಿಕಾಸ ಯೋಜನೆಯಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಆರ್ಥಿಕವಾಗಿ ಹಿಂದುಳಿದ ವರ್ಗದವರಿಗೆ ಉಚಿತವಾಗಿ ತರಬೇತಿಗಳನ್ನು ನೀಡಲಾಗುತ್ತದೆ.

ಆರೋಗ್ಯ ಕ್ಷೇತ್ರದಲ್ಲಿ ಪ್ರಧಾನಮಂತ್ರಿ ಕೌಶಲ್ಯ ವಿಕಾಸ ಯೋಜನೆಯಡಿ ತರಬೇತಿ ಪಡೆದ ಫಲಾನುಭವಿಗಳ ಆಕಾಶವಾಣಿಯೊಂದಿಗೆ ತಮ್ಮ ಅನಿಸಿಕೆ ಹಂಚಿಕೊಂಡಿದ್ದಾರೆ..

ಧ್ವನಿ...1( ಪಿ.ಟಿ.ಸಿ, ಬೆಂಗಳೂರು ಗ್ರಾ. ಜಿಲ್ಲೆ)

ಧ್ವನಿ..2( ವರ್ಷಿಣಿ ಫಲಾನುಭವಿ )

*********+

ಮುಂಬರುವ ವಿಧಾನಸಭಾ ಚುನಾವಣೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ಎದುರಿಸಲಿದ್ದು, ಮುಂದಿನ ಸಲವೂ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಸ್ತಿತ್ವಕ್ಕೆ ಬರಲಿದೆ ಎಂದು, ಮಾಜಿ ಕೇಂದ್ರ ಸಚಿವ ಎಂ. ವೀರಪ್ಪ ಮೊಯ್ಲಿ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ವಿಜಯಪುರದಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಕೆಪಿಸಿಸಿ ಅಧ್ಯಕ್ಷ ಡಾ. ಜಿ. ಪರಮೇಶ್ವರ್ ನಡುವೆ ಯಾವುದೇ ಭಿನ್ನಾಭಿಪ್ರಾಯವಿಲ್ಲ, ಬಿಜೆಪಿ ಸದ್ಯಕ್ಕೆ ಒಡೆದ ಮನೆಯಾಗಿದ್ದು, ಕಾಂಗ್ರೆಸ್ ಬಲಿಷ್ಠವಾಗಿದೆ ಎಂದರು.

****************ಮುಕ್ತಾಯ******************